Akashvani : Bangalore
National Bulletin In Kannada
17.08.2024: 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
17.08.2024: 7.35AM

**ಮುಖ್ಯಾಂಶಗಳು :**

೧. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಆಂಧ್ರಪ್ರದೇಶಕ್ಕೆ ಒಂದು ದಿನದ ಭೇಟಿ

೨. ಬೆಂಗಳೂರು ಮೆಟ್ರೋ ರೈಲು ಮೂರನೇ ಹಂತದ ಯೋಜನೆಗೆ ಕೇಂದ್ರ ಸಂಪುಟ ಅಸ್ತು

೩. ಕೋಲ್ಕತ್ತಾ ಕಿರಿಯ ವೈದ್ಯ ಹತ್ಯೆ ಪ್ರಕರಣ; ದೇಶಾದ್ಯಂತ ಇಂದು ಭಾರತೀಯ ವೈದ್ಯಕೀಯ ಸಂಘದಿಂದ ಪ್ರತಿಭಟನೆ

೪. ದೆಹಲಿಯಲ್ಲಿಂದು ಬಿಜೆಪಿ ರಾಷ್ಟ್ರೀಯ ಪದಾಧಿಕಾರಿಗಳ ಸಭೆ

*****

ನವದೆಹಲಿಯಲ್ಲಿ ಇಂದು ಬಿಜೆಪಿ ರಾಷ್ಟ್ರೀಯ ಪದಾಧಿಕಾರಿಗಳ ಸಭೆ ನಡೆಯಲಿದೆ. ಪಕ್ಷದ ಪ್ರಧಾನ ಕಛೇರಿಯಲ್ಲಿ ರಾಷ್ಟ್ರೀಯ ಅಧ್ಯಕ್ಷ ಜೆ ಪಿ ನಡ್ಡಾ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಭೆಯಲ್ಲಿ ಪಕ್ಷದ ಸದಸ್ಯತ್ವ ಅಭಿಯಾನ, ಸಾಂಸ್ಥಿಕ ಚುನಾವಣೆಗಳು ಹಾಗೂ ಮುಂಬರುವ ವಿಧಾನಸಭಾ ಚುನಾವಣೆಗೆ ಸಿದ್ಧತೆ ಕುರಿತು ಚರ್ಚಿಸುವ ನಿರೀಕ್ಷೆಯಿದೆ. ಸಭೆಯಲ್ಲಿ ಬಿಜೆಪಿ ರಾಷ್ಟ್ರೀಯ ಪದಾಧಿಕಾರಿಗಳಲ್ಲದೆ, ಪಕ್ಷದ ರಾಜ್ಯಾಧ್ಯಕ್ಷರು ಹಾಗೂ ವಿವಿಧ ರಾಜ್ಯಗಳಲ್ಲಿನ ಪಕ್ಷದ ಸಂಘಟನೆಯ ಉಸ್ತುವಾರಿ ಪ್ರಧಾನ ಕಾರ್ಯದರ್ಶಿಗಳು ಮತ್ತು ಇತರ ನಾಯಕರು ಸಭೆಯಲ್ಲಿ ಭಾಗವಹಿಸಲಿದ್ದಾರೆ. ಲೋಕಸಭೆ ಚುನಾವಣೆ ನಂತರ ಬಿಜೆಪಿ ಪದಾಧಿಕಾರಿಗಳ ಮೊದಲ ದೊಡ್ಡ ಸಭೆ ಇದಾಗಿದೆ.

*****

ದೇಶದ ವಿವಿಧ ನಗರಗಳಲ್ಲಿ ಹೊಸದಾಗಿ ಮೂರು ಮೆಟ್ರೋ ರೈಲು ಯೋಜನೆಗಳಿಗೆ ಕೇಂದ್ರ ಸಂಪುಟ ಅನುಮೋದನೆ ನೀಡಿದೆ. ೧೫ ಸಾವಿರದ ೬೧೧ ಕೋಟಿ ರೂಪಾಯಿ ಅಂದಾಜು ವೆಚ್ಚದ ಬೆಂಗಳೂರು ಮೆಟ್ರೋದ ಮೂರನೇ ಹಂತ, ೧೨ ಸಾವಿರದ ೨೦೦ ಕೋಟಿ ರೂಪಾಯಿ ವೆಚ್ಚದ ಥಾಣೆ ಇಂಟೆಗ್ರೆಲ್ ವರ್ತುಲ ಮೆಟ್ರೋ ರೈಲು ಯೋಜನೆ ಹಾಗೂ ಪುಣೆ ಮೆಟ್ರೋ ಮೊದಲ ಹಂತದ ಯೋಜನೆಯ ಸ್ವರ್ಗೇಟ್‌ನಿಂದ ಕಟ್ರಾಜ್‌ವರೆಗೆ ವಿಸ್ತರಣೆಯನ್ನು ಒಳಗೊಂಡಿದ್ದು, ಸುಮಾರು ೩ ಸಾವಿರ ಕೋಟಿ ರೂಪಾಯಿ ಅಂದಾಜು ವೆಚ್ಚವಾಗಲಿದೆ. ಸಂಪುಟ ಸಭೆಯ ನಂತರ ಮಾಧ್ಯಮಗಳಿಗೆ ಈ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಪ್ರಸ್ತುತ ದೇಶದ ೨೧ ನಗರಗಳಲ್ಲಿ ಮೆಟ್ರೋ ರೈಲು ಕಾರ್ಯ ನಿರ್ವಹಿಸುತ್ತಿದೆ. ಆದರೆ ೧೦ ವರ್ಷಗಳ ಹಿಂದೆ ಕೇವಲ ೫ ನಗರಗಳಲ್ಲಿ ಮಾತ್ರ

ಮೆಟ್ರೋ ಕಾರ್ಯಾಚರಣೆ ನಡೆಸುತ್ತಿತ್ತು ಎಂದು ವಿವರಿಸಿದರು. ಜಾಗತಿಕ ಮಟ್ಟದಲ್ಲಿ ಮೆಟ್ರೋ ಜಾಲದ ಉದ್ದದ ವಿಷಯದಲ್ಲಿ ಭಾರತ ೩ನೇ ಸ್ಥಾನದಲ್ಲಿದ್ದು, ಬೆಂಗಳೂರು ಮೆಟ್ರೋ ರೈಲು ಯೋಜನೆಯ ಮೂರನೇ ಹಂತ ೨೦೨೯ರ ವೇಳೆಗೆ ಕಾರ್ಯಾರಂಭ ಮಾಡಲಿದ್ದು, ಬೆಂಗಳೂರು ನಗರದ ಪಶ್ಚಿಮ ಭಾಗಕ್ಕೆ ಸಂಪರ್ಕ ಕಲ್ಪಿಸುವ ಸುಮಾರು ೪೪.೬೫ ಕಿಲೋಮೀಟರ್‌ನಷ್ಟು ಹೊಸ ಮೆಟ್ರೋ ಮಾರ್ಗವನ್ನು ಈ ಹಂತದಲ್ಲಿ ಸೇರ್ಪಡೆಗೊಳಿಸಲಾಗುವುದು ಎಂದರು. ಮೂರನೇ ಹಂತದ ಕಾರ್ಯಾಚರಣೆಯ ನಂತರ ಬೆಂಗಳೂರು ನಗರವು ೨೨೦ ಕಿಲೋಮೀಟ ರ್ ಸಕ್ರಿಯ ಮೆಟ್ರೋ ಜಾಲ ಹೊಂದಲಿದ್ದು, ಮೂರನೇ ಹಂತದ ಕಾರಿಡಾರ್‌ಗಳು ಬೆಂಗಳೂರು ನಗರದ ದಕ್ಷಿಣ ಭಾಗ, ಪಶ್ಚಿಮ ಹೊರವರ್ತುಲ ರಸ್ತೆ, ಮಾಗಡಿ ರಸ್ತೆ ಹಾಗೂ ವಿವಿಧ ಪ್ರದೇಶಗಳಿಗೆ ಸಂಪರ್ಕವನ್ನು ಕಲ್ಪಿಸಲಿದೆ. ಇದರಿಂದಾಗಿ ಬೆಂಗಳೂರು ನಗರದ ಸಂಚಾರ ದಟ್ಟಣೆ ನಿವಾರಣೆಯಾಗುವ ನಿರೀಕ್ಷೆ ಇದೆ ಎಂದು ಸಚಿವರು ಹೇಳಿದರು. ಬಿಹಾರದ ಬಿಹ್ತಾ ಹಾಗೂ ಪಶ್ಚಿಮಬಂಗಾಳದ ಬಾಗ್ದೋಗ್ರಾದಲ್ಲಿ ಹೊಸ ಸಿವಿಲ್ ಎನ್‌ಕ್ಲೇವ್‌ಗಳಿಗೆ ಸಂಪುಟದ ಆರ್ಥಿಕ ವ್ಯವಹಾರಗಳ ಸಮಿತಿ ಅನುಮೋದನೆ ನೀಡಿದ್ದು, ಬಾಗ್ದೋಗ್ರಾ ವಿಮಾನ ನಿಲ್ದಾಣದಲ್ಲಿ ಹೊಸ ಸಿವಿಲ್ ಎನ್‌ಕ್ಲೇವ್ ಅನ್ನು ಒಂದು ಸಾವಿರದ ೫೪೯ ಕೋಟಿ ರೂಪಾಯಿ ಅಂದಾಜು ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು ಎಂದು ವಿವರಿಸಿದರು. ಬಿಹಾರದ ಬಿಹ್ತಾದಲ್ಲಿ ಒಂದು ಸಾವಿರದ ೪೧೩ ಕೋಟಿ ರೂಪಾಯಿ ವೆಚ್ಚದಲ್ಲಿ ಹೊಸ ಸಿವಿಲ್ ಎನ್‌ಕ್ಲೇವ್ ಅನ್ನು ಅಭಿವೃದ್ಧಿಪಡಿಸಲಾಗುವುದು. ಈ ಮೂಲಸೌಕರ್ಯ ಯೋಜನೆಯು ಪಾಟ್ನಾ ವಿಮಾನ ನಿಲ್ದಾಣದ ಸಾಮರ್ಥ್ಯವನ್ನು ಹೆಚ್ಚಿಸಲು ನೆರವಾಗಲಿದೆ.

*****

ಕೋಲ್ಕತ್ತಾದಲ್ಲಿ ಕಿರಿಯ ವೈದ್ಯೆ ಅತ್ಯಾಚಾರ, ಕೊಲೆ ಪ್ರಕರಣ ಖಂಡಿಸಿ ದೇಶಾದ್ಯಂತ ಇಂದು ಭಾರತೀಯ ವೈದ್ಯಕೀಯ ಸಂಘ - ಐಎಂಎ ಪ್ರತಿಭಟನೆ ನಡೆಸುತ್ತಿವೆ. ಕೋಲ್ಕತ್ತಾದ ಆರ್‌ಜಿ ಕಾರ್ ವೈದ್ಯಕೀಯ ಆಸ್ಪತ್ರೆಯಲ್ಲಿ ಕಳೆದ ಬುಧವಾರ ರಾತ್ರಿ ನಡೆದ ಕೃತ್ಯದ ವಿರುದ್ಧ ಇಂದು ಬೆಳಗ್ಗೆ ೬ ಗಂಟೆಯಿಂದ ದೇಶಾದ್ಯಂತ ಹೊರರೋಗಿ ಸೇವೆಗಳನ್ನು ಬಂದ್ ಮಾಡಲಾಗಿದೆ. ತುರ್ತು ಹಾಗೂ ಅಪಘಾತ ಸೇವೆಗಳು ಎಂದಿನಂತೆ ಕಾರ್ಯನಿರ್ವಹಿಸುವ ಬಗ್ಗೆ ರಾಜ್ಯಗಳ ಆರೋಗ್ಯ ಇಲಾಖೆಗಳ ಜೊತೆಗಿನ ಸಭೆ ಬಳಿಕ ಐಎಂಎ ಈ ನಿರ್ಧಾರ ಕೈಗೊಂಡಿದೆ. ಮಹಿಳಾ ವೈದ್ಯೆಯ ಮೇಲಿನ ಅಮಾನುಷ ಘಟನೆಯನ್ನು ವಿರೋಧಿಸಿ ಕೋಲ್ಕತ್ತಾದ ಆರ್‌ಜಿ ಕಾರ್ ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿಗಳು ಸ್ವಾತಂತ್ರ್ಯ ದಿನಾಚರಣೆಯಂದು ಪ್ರತಿಭಟನೆ ನಡೆಸಿದರು. ಪ್ರತಿಭಟನೆ ನಡೆಯುತ್ತಿರುವಾಗಲೇ ಆವರಣದ ಮೇಲೆ ಗುಂಪೊಂದು ದಾಳಿ ನಡೆಸಿತು. ಈ ಹೇಯ ಕೃತ್ಯದ ವಿರುದ್ಧ ಇಂದು ಬೆಳಗ್ಗೆ ೬ ಗಂಟೆಯಿಂದ ನಾಳೆ ಬೆಳಗ್ಗೆ ೬ ಗಂಟೆಯವರೆಗೆ ಮಾಡರ್ನ್ ಮೆಡಿಸಿನ್ ವೈದ್ಯರ ಸೇವೆಯನ್ನು ಬಂದ್ ಮಾಡಲಾಗುತ್ತಿದೆ. ವೈದ್ಯಕೀಯ ವೃತ್ತಿಯ ಸ್ವರೂಪದಿಂದಾಗಿ ವಿಶೇಷವಾಗಿ ವೈದ್ಯೆಯರು ಹಿಂಸೆಗೆ ಬಲಿಯಾಗುತ್ತಾರೆ. ಅಂತಹ ವೈದ್ಯರಿಗೆ ಆಸ್ಪತ್ರೆ ಮತ್ತು ಕ್ಯಾಂಪಸ್‌ಗಳಲ್ಲಿ ಭದ್ರತೆ ಒದಗಿಸುವ ಜವಾಬ್ದಾರಿ ಅಧಿಕಾರಿಗಳ ಮೇಲಿದೆ. ವೈದ್ಯರು, ಶುಶ್ರೂಷಕರು ಹಾಗೂ ಇತರ ಆರೋಗ್ಯ ಕಾರ್ಯಕರ್ತರ ಬೇಡಿಕೆಗಳನ್ನು ನೋಡಿಕೊಳ್ಳುವ ಅಧಿಕಾರಿಗಳ ನಿರಾಸಕ್ತಿಯಿಂದಾಗಿ ದೈಹಿಕ ಹಲ್ಲೆ, ಅಪರಾಧಗಳು ನಡೆಯುತ್ತಿವೆ ಎಂದು ಐಎಂಎ ಪ್ರಕಟಣೆಯಲ್ಲಿ ವಿವರಿಸಿದೆ. ಈ ನಡುವೆ ವೈದ್ಯರ

ಮೇಲಿನ ಹಲ್ಲೆ ಸಂದರ್ಭದಲ್ಲಿ ಗರಿಷ್ಠ ಆರು ಗಂಟೆಗಳ ಒಳಗೆ ಎಫ್‌ಐಆರ್ ದಾಖಲಿಸಲು ಸಂಸ್ಥೆಯ ಮುಖ್ಯಸ್ಥರು ಜವಾಬ್ದಾರರಾಗಿರುತ್ತಾರೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ನಿರ್ದೇಶಿಸಿದೆ. ಈ ಸಂಬಂಧ ಕೇಂದ್ರ ಸರ್ಕಾರಿ ಆಸ್ಪತ್ರೆಗಳು ಮತ್ತು ವೈದ್ಯಕೀಯ ಕಾಲೇಜುಗಳ ಮುಖ್ಯಸ್ಥರಿಗೆ ಆರೋಗ್ಯ ಸೇವೆಗಳ ಮಹಾನಿರ್ದೇಶಕ ಅತುಲ್ ಗೋಯೆಲ್ ಪತ್ರ ಬರೆದಿದ್ದಾರೆ. ಇದೇ ವೇಳೆ, ಕೋಲ್ಕತ್ತಾದಲ್ಲಿ ನಡೆದ ವೈದ್ಯೆಯ ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ನ್ಯಾಯ ಕೋರಿ ಭಾರತೀಯ ಚರ್ಮರೋಗ ತಜ್ಞರು, ಪಶುವೈದ್ಯರು ಮತ್ತು ಕುಷ್ಠರೋಗ ತಜ್ಞರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದ್ದಾರೆ. ಇನ್ನೊಂದೆಡೆ, ಘಟನೆಯನ್ನು ಖಂಡಿಸಿ ವಿವಿಧ ವೈದ್ಯಕೀಯ ಸಂಘಗಳು ಮುಷ್ಕರವನ್ನು ಮುಂದುವರೆಸಿದ್ದು, ಇದರಿಂದ ಹಲವು ನಗರಗಳಲ್ಲಿ ವೈದ್ಯಕೀಯ ಸೇವೆಗಳು ಸ್ಥಗಿತಗೊಂಡಿವೆ.

*****

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ಇಂದು ಆಂಧ್ರಪ್ರದೇಶನ ನೆಲ್ಲೂರಿಗೆ ಒಂದು ದಿನದ ಭೇಟಿ ನೀಡಲಿದ್ದಾರೆ. ಬೆಳಗ್ಗೆ ಹೆಲಿಕಾಪ್ಟರ್ ಮೂಲಕ ನೆಲ್ಲೂರು ಪೊಲೀಸ್ ಗ್ರೌಂಡ್ ಹೆಲಿಪ್ಯಾಡ್‌ಗೆ ಆಗಮಿಸಲಿರುವ ಉಪರಾಷ್ಟ್ರಪತಿಗಳು ಅಲ್ಲಿಂದ ರಸ್ತೆ ಮೂಲಕ ಅಕ್ಷರ ವಿದ್ಯಾಲಯಕ್ಕೆ ತೆರಳಿ, ವಿದ್ಯಾಲಯದ ಕ್ಯಾಂಪಸ್ ಹಾಗೂ ಕೌಶಲ್ಯಾಭಿವೃದ್ಧಿ ಕೇಂದ್ರಕ್ಕೆ ಭೇಟಿ ನೀಡಿ ವೀಕ್ಷಿಸಲಿದ್ದಾರೆ.

ಉಪರಾಷ್ಟ್ರಪತಿಗಳು ತಮ್ಮ ವಾಸ್ತವ್ಯದ ಅವಧಿಯಲ್ಲಿ ಸ್ವರ್ಣಭಾರತ ಟ್ರಸ್ಟ್ ಹಾಗೂ ಮುಪ್ಪವರಪು ಪ್ರತಿಷ್ಠಾನಕ್ಕೂ ಭೇಟಿ ನೀಡಲಿದ್ದಾರೆ. ನೆಲ್ಲೂರಿನ ವೆಂಕಟಾಚಲಂನಲ್ಲಿರುವ ಸ್ವರ್ಣಭಾರತ ಟ್ರಸ್ಟ್‌ನ ೨೩ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಅಧ್ಯಕ್ಷತೆ ವಹಿಸಲಿದ್ದಾರೆ. ಸಮಾರಂಭದಲ್ಲಿ ಮಾಜಿ ಉಪರಾಷ್ಟ್ರಪತಿ ಎಂ. ವೆಂಕಯ್ಯನಾಯ್ಡು ಅವರೂ ಸಹ ಉಪಸ್ಥಿತರಿರಲಿದ್ದಾರೆ.

*****

ಇಂದು ಮಲಯಾಳಂ ಹೊಸ ವರ್ಷದ ಮೊದಲ ದಿನ - ಚಿಂಗಂ ತಿಂಗಳು ಮಲಯಾಳಂ ಹೊಸ ವರ್ಷದ ಆರಂಭವನ್ನು ಸೂಚಿಸುತ್ತದೆ. ಈ ದಿನವನ್ನು ಅತ್ಯಂತ ಉತ್ಸಾಹ ಹಾಗೂ ಸಂಪ್ರದಾಯದಿಂದ ಆಚರಿಸಲಾಗುತ್ತದೆ. ಚಿಂಗಂ ಸುಗ್ಗಿಯ ಕಾಲವಾಗಿದ್ದು, ಜನರು ಹೊಸ ವಸ್ತ್ರಗಳನ್ನು ಧರಿಸಿ, ಹೊಸ ವರ್ಷವನ್ನು ಸ್ವಾಗತಿಸಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಪ್ರಸಿದ್ಧ ಶಬರಿಮಲೆ ಹಾಗು ಗುರುವಾಯೂರು ದೇವಾಲಯಗಳಿಗೆ ಭೇಟಿ ನೀಡುತ್ತಿದ್ದಾರೆ.

*****

ಜಮ್ಮು ಕಾಶ್ಮೀರ ಹಾಗೂ ಹರಿಯಾಣ ವಿಧಾನಸಭಾ ಚುನಾವಣೆಗೆ ಕೇಂದ್ರ ಚುನಾವಣಾ ಆಯೋಗ ದಿನಾಂಕ ಪ್ರಕಟಿಸಿದೆ. ಮುಖ್ಯ ಚುನಾವಣಾ ಆಯುಕ್ತ - ಸಿಇಸಿ ರಾಜೀವ್ ಕುಮಾರ್ ನಿನ್ನೆ ನವದೆಹಲಿಯಲ್ಲಿ ಮಾಧ್ಯಮಗೋಷ್ಟಿಯಲ್ಲಿ ಚುನಾವಣಾ ದಿನಾಂಕಗಳನ್ನು ಪ್ರಕಟಿಸಿದರು. "ಜಮ್ಮು ಕಾಶ್ಮೀರದ ವಿಧಾನಸಭೆ ಚುನಾವಣೆ ಸೆಪ್ಟಂಬರ್ ೧೮, ೨೫ ಹಾಗೂ ಅಕ್ಟೋಬರ್ ೧ ರಂದು ಒಟ್ಟು ಮೂರು ಹಂತದಲ್ಲಿ ನಡೆಯಲಿದೆ. ಹರಿಯಾಣ ವಿಧಾನಸಭೆ ಚುನಾವಣೆ ಅಕ್ಟೋಬರ್ ೧ರಂದು

ನಡೆಯಲಿದೆ. ಎರಡೂ ರಾಜ್ಯಗಳ ಮತ ಎಣಿಕೆ ಅಕ್ಟೋಬರ್ ೪ ರಂದು ಜರುಗಲಿದೆ" ಎಂದು ತಿಳಿಸಿದರು.

ಕಾಶ್ಮೀರ ಕಣಿವೆ ಹಿಂಸೆಯನ್ನು ತಿರಸ್ಕರಿಸಿದೆ. ಈ ಬಾರಿ ಹೆಚ್ಚಿನ ಪ್ರಮಾಣದಲ್ಲಿ ಮತದಾನ ನಡೆಯಲಿದ್ದು, ಮಹಿಳಾ ಮತದಾರರು ಅಧಿಕ ಸಂಖ್ಯೆಯಲ್ಲಿ ಭಾಗವಹಿಸುವ ನಿರೀಕ್ಷೆ ಇದೆ" ಎಂದು ರಾಜೀವ್ ಕುಮಾರ್ ಆಶಯ ವ್ಯಕ್ತಪಡಿಸಿದರು. "ಚುನಾವಣಾ ಪ್ರಚಾರ ಕಾರ್ಯ ಭಯವಿಲ್ಲದೆ ನಡೆಯಬೇಕು. ಈ ಬಾರಿ ಯುವಕರನ್ನು ಚುನಾವಣೆಯ ರಾಯಭಾರಿಗಳನ್ನಾಗಿಸಲಾಗುವುದು. ಆಗಸ್ಟ್ ೧೯ ರಂದು ಅಮರನಾಥ ಯಾತ್ರೆ ಮುಕ್ತಾಯಗೊಳ್ಳಲಿದ್ದು, ಆಗಸ್ಟ್ ೨೦ರಂದು ಮತದಾರರ ಪಟ್ಟಿ ಪ್ರಕಟಿಸಲಾಗುವುದು" ಎಂದರು."ಜಮ್ಮು ಮತ್ತು ಕಾಶ್ಮೀರದಲ್ಲಿ ಒಟ್ಟು ೯೦ ವಿಧಾನಸಭಾ ಕ್ಷೇತ್ರಗಳಿವೆ. ಈ ಪೈಕಿ ೭೪ ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದು, ೭ ಮತ್ತು ೯ ಕ್ಷೇತ್ರಗಳು ಕ್ರಮವಾಗಿ ಪರಿಶಿಷ್ಟಜಾತಿ ಹಾಗೂ ವರ್ಗಗಳಿಗೆ ಮೀಸಲಾಗಿದೆ. ರಾಜ್ಯದಲ್ಲಿ ಒಟ್ಟು ೧೧,೮೩೮ ಮತಗಟ್ಟೆಗಳಿವೆ" ಎಂದು ಮಾಹಿತಿ ನೀಡಿದರು.

*****

೭೦ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳನ್ನು ಪ್ರಕಟಿಸಲಾಗಿದ್ದು, ಮಲೆಯಾಳಂನ - ಅಟ್ಟಂ, ಅತ್ಯುತ್ತಮ ಚಲನಚಿತ್ರ ಪ್ರಶಸ್ತಿಗೆ ಭಾಜನವಾಗಿದೆ. ಕನ್ನಡದ ಕಾಂತಾರ ಚಿತ್ರಕ್ಕೆ ಸಂಪೂರ್ಣ ಮನರಂಜನೆಯ ಅತ್ಯುತ್ತಮ ಪ್ರಶಸ್ತಿ ಹಾಗೂ ಇದೇ ಚಿತ್ರದ ನಟನೆಗಾಗಿ ರಿಷಬ್ ಶೆಟ್ಟಿ ಅವರಿಗೆ, ಅತ್ಯುತ್ತಮ ನಟ ಪ್ರಶಸ್ತಿ ದೊರೆತಿದೆ. ಕೆಜಿಎಫ್ -೨ ಗೆ ಅತ್ಯುತ್ತಮ ಕನ್ನಡ ಚಿತ್ರ, ಗುಲ್ ಮೊಹರ್ ಗೆ ಅತ್ಯುತ್ತಮ ಹಿಂದಿ ಚಿತ್ರ ಪ್ರಶಸ್ತಿ ಲಭಿಸಿದೆ. ದೆಹಲಿಯಲ್ಲಿ ನಿನ್ನೆ ಪ್ರಶಸ್ತಿಗಳ ಪಟ್ಟಿ ಪ್ರಕಟಿಸಿದ ತೀರ್ಪುಗಾರರ ಮಂಡಳಿ ಅಧ್ಯಕ್ಷ ರಾಹುಲ್ ರವೈಲ್ , ಈ ಬಾರಿ ೧೧ ಭಾಷೆಗಳ, ೩೦ ಚಿತ್ರಗಳನ್ನು ಪ್ರಶಸ್ತಿಗೆ ಆಯ್ಕೆಮಾಡಲಾಗಿದೆ. ಉಂಚೈ ಹಿಂದಿ ಚಿತ್ರದ ನಿರ್ದೇಶನಕ್ಕಾಗಿ ಸೂರಜ್. ಆರ್. ಬಾರ್ಜಾತ್ಯ ಅವರಿಗೆ ಅತ್ಯತ್ತಮ ನಿರ್ದೇಶಕ ಪ್ರಶಸ್ತಿ, ನಿತ್ಯಾಮೆನನ್ ಮತ್ತು ಮಾನ್ಸಿ ಪಾರೆಕ್ ಅವರಿಗೆ ಅತ್ಯುತ್ತಮ ನಟಿ ಪ್ರಶಸ್ತಿಗೆ ಆಯ್ಕೆಮಾಡಲಾಗಿದೆ ಎಂದರು. ಬ್ರಹ್ಮಾಸ್ತ್ರ ಚಿತ್ರದ ಗಾಯನಕ್ಕಾಗಿ, ಅರ್ಜಿತ್ ಸಿಂಗ್ ಅವರಿಗೆ ಅತ್ಯುತ್ತಮ ಹಿನ್ನೆಲೆ ಗಾಯಕ ಪ್ರಶಸ್ತಿ, ಇದೇ ಚಿತ್ರಕ್ಕೆ ಪ್ರೀತಂ ಅವರಿಗೆ ಅತ್ಯತ್ತಮ ಸಂಗೀತ ನಿರ್ದೇಶಕ ಪ್ರಶಸ್ತಿ, ಪೊನಿಯನ್ ಸ್ಸೆಲ್ವಂ -೨ ಚಿತ್ರಕ್ಕಾಗಿ ಎ.ಆರ್.ರೆಹಮಾನ್ ಅವರಿಗೆ ಅತ್ಯತ್ತಮ ಹಿನ್ನೆಲೆ ಸಂಗೀತ ನಿರ್ದೇಶಕ ಪ್ರಶಸ್ತಿ ದೊರೆತಿದೆ. ಈ ನಡುವೆ ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ರಾಜ್ಯ ಬಿಜೆಪಿ ಘಟಕದ ರಾಜ್ಯಾದ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಪ್ರಶಸ್ತಿ ವಿಜೇತರನ್ನು ಅಭಿನಂದಿಸಿದ್ದಾರೆ. ಅತ್ಯುತ್ತಮ ನಟ ಪ್ರಶಸ್ತಿ ಪಡೆದಿರುವ ರಿಷಬ್ ಶೆಟ್ಟಿ, ಕನ್ನಡದ ಅತ್ಯುತ್ತಮ ಚಿತ್ರ ಪ್ರಶಸ್ತಿ ಪಡೆದಿರುವ ಕೆಜಿಎಫ್-೨, 'ಮಧ್ಯಂತರ' ಚಿತ್ರದ ಸಂಕಲನಕ್ಕಾಗಿ ಸುರೇಶ್ ಅರಸ್ ಹಾಗೂ 'ಮಧ್ಯಂತರ' ಕಿರು ಚಿತ್ರದ ನಿರ್ದೇಶಕರ ಬಸ್ತಿ ದಿನೇಶ್ ಶಣೈ ಅವರಿಗೆ ಅತ್ಯುತ್ತಮ ನಿರ್ದೇಶಕ ಪ್ರಶಸ್ತಿ ಬಂದಿರುವುದು ಅತ್ಯಂತ ಸಂತಸ ತಂದಿದೆ ಎಂದು ಮುಖ್ಯಮಂತ್ರಿ ತಮ್ಮ ಸಂದೇಶದಲ್ಲಿ ಹೇಳಿದ್ದಾರೆ.

******